All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

18.07.2025 2.30 p.m.

<><><><>

ಮುಖ್ಯಾಂಶಗಳು

- ಕೃಷ್ಣಾ ಜಲವಿವಾದ ನ್ಯಾಯಾಧೀಕರಣ ಅವಧಿ ವಿಸ್ತರಣೆ ಬಗ್ಗೆ ರಾಜ್ಯದ ವಿರೋಧ ವಿಲ್ಲ - ಮುಖ್ಯಮಂತ್ರಿ ಸ್ಪಷ್ಟನೆ
- ಮುಖ್ಯಮಂತ್ರಿ ಸ್ಥಾನ ಉಳಿಸಿಕೊಳ್ಳಲು ಸಾಧನಾ ಸಮಾವೇಶ ; ಬಿಜೆಪಿ ಟೀಕೆ
- ಕರಾವಳಿಯಲ್ಲಿ ಮುಂದುವರೆದ ಭಾರೀ ಮಳೆ ; ಹಲವೆಡೆ ಗುಡ್ಡ ಕುಸಿತ ಮನೆಗಳಿಗೆ ಹಾನಿ
- ಕೊಡಗು ಜಿಲ್ಲೆಗೆ ಜೂನ್ ಅಂತ್ಯದ ವೇಳೆಗೆ ೧೦ ಲಕ್ಷಕ್ಕೂ ಅಧಿಕ ಪ್ರವಾಸಿಗರ ಭೇಟಿ

<><><><>

ಕೃಷ್ಣಾ ಜಲವಿವಾದ ನ್ಯಾಯಾಧೀಕರಣದ ಅವಧಿಯನ್ನು ವಿಸ್ತರಿಸಿರುವ ಬಗ್ಗೆ ಯಾವುದೇ ವಿರೋಧವಿಲ್ಲ ಆದರೆ ನೀರು ಹಂಚಿಕೆಯ ಬಗ್ಗೆ ಕೇಂದ್ರ ಸರ್ಕಾರ ಇದುವರೆಗೆ ಅಧಿಸೂಚನೆ ಹೊರಡಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿ ಇಂದು ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯದ ನಡುವೆ ಅಂತಾರಾಜ್ಯ ಜಲವಿವಾದವಿದ್ದು, ನಮ್ಮ ರಾಜ್ಯಕ್ಕೆ ಸಂಬಂಧಿಸಿದಂತೆ ನೀರು ಹಂಚಿಕೆಯ ಅಧಿಸೂಚನೆ ಹೊರಡಿಸಲು ಕೇಂದ್ರಕ್ಕೆ ಯಾವುದೇ ಅಡ್ಡಿಯಿರುವುದಿಲ್ಲ ಮತ್ತು ತೀರ್ಪಿನನ್ವಯ ನೀರಿನ ಹಂಚಿಕೆಯಲ್ಲಿ ರಾಜ್ಯಕ್ಕೆ ಯಾವುದೇ ನಷ್ಟವೂ ಆಗುವುದಿಲ್ಲ. ಆಲಮಟ್ಟಿ ಜಲಾಶಯದ ಎತ್ತರವನ್ನು ೫೨೪.೨೬ ಮೀಟರ್‌ಗಳಿಗೆ ಹೆಚ್ಚಿಸಲು ಅನುಮತಿ ನೀಡಲಾಗಿದೆ ಎಂದರು.

**ಧ್ವನಿ : ಮುಖ್ಯಮಂತ್ರಿ**

ನಾಳೆ ಮೈಸೂರಿನಲ್ಲಿ ನಡೆಯುತ್ತಿರುವ ಸಮಾವೇಶದ ಕುರಿತು ಬಿಜೆಪಿ ಟೀಕೆ ಬಗ್ಗೆ ಉತ್ತರಿಸಿ, ಕಾಂಗ್ರೆಸ್ ಸರ್ಕಾರ ಮಾಡಿರುವ ಜನಪರ ಕೆಲಸವನ್ನು ಜನರ ಮುಂದಿಡುವ ಕಾರ್ಯಕ್ರಮವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ನಾಳೆ ಸುಮಾರು ೨ ಸಾವಿರದ ೬೦೦ ಕೋಟಿ ರೂಪಾಯಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತಿದೆ ಎಂದು ತಿಳಿಸಿದರು. ಆರ್‌ಸಿಬಿ ವಿಜಯೋತ್ಸವದ ವೇಳೆ ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖಾ ಆಯೋಗದ ವರದಿಯ ಬಗ್ಗೆ ಮುಂದಿನ ಸಚಿವ ಸಂಪುಟದಲ್ಲಿ ತನಿಖಾ ವರದಿಯ ಬಗ್ಗೆ ಚರ್ಚಿಸಿ ಸೂಕ್ತ ತೀರ್ಮಾನವನ್ನು ಕೈಗೊಳ್ಳಲಾಗುವುದು ಎಂದರು. ಧರ್ಮಸ್ಥಳದ ಸೌಜನ್ಯ ಪ್ರಕರಣದಲ್ಲಿ ನಿವೃತ್ತ ನ್ಯಾಯಾಧೀಶರೊಬ್ಬರು ಪ್ರಕರಣದ ಎಸ್‌ಐಟಿ

ತನಿಖೆಯಾಗಬೇಕೆಂದು ಒತ್ತಾಯಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಸರ್ಕಾರ ಈ ಬಗ್ಗೆ ಕಾನೂನು ಕ್ರಮ ತೆಗೆದುಕೊಳ್ಳಲಿದೆ. ಪೊಲೀಸ್ ಇಲಾಖೆಯೊಂದಿಗೆ ಚರ್ಚಿಸಿ ಎಸ್‌ಐಟಿ ತನಿಖೆಯ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ಪ್ರಕರಣದ ತನಿಖೆಯ ವಿಷಯದಲ್ಲಿ ಸರ್ಕಾರ ಯಾವುದೇ ಒತ್ತಡಕ್ಕೆ ಮಣಿಯದೇ, ಕಾನೂನು ರೀತ್ಯ ಕ್ರಮ ಕೈಗೊಳ್ಳುತ್ತದೆ ಎಂದು ತಿಳಿಸಿದರು. ಬೆಂಗಳೂರಿನ ಸುಮಾರು ೪೦ ಶಾಲೆಗಳಿಗೆ ಬಾಂಬ್ ಬೆದರಿಕೆ ಬಂದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ತನಿಖೆ ನಡೆಸಲು ಪೊಲೀಸರಿಗೆ ಸೂಚನೆ ನೀಡಲಾಗಿದೆ. ಸುಳ್ಳು ಹೇಳಿ ಅಪಪ್ರಚಾರ, ಪ್ರಚೋದನೆಗೊಳಿಸುವ ಕೃತ್ಯಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಕಾನೂನು ರೂಪಿಸಲಾಗುತ್ತಿದೆ ಎಂದರು. ಇದೆ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ ಹೆಚ್.ಸಿ ಮಹದೇವಪ್ಪ, ಶಾಸಕ ಡಿ. ರವಿಶಂಕರ್, ಡಾ. ಡಿ. ತಿಮ್ಮಯ್ಯ ಸೇರಿದಂತೆ ಹಲವರು ಭಾಗಿಯಾಗಿದ್ದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನ ಉಳಿಸಿಕೊಳ್ಳಲು ಸಾಧನ ಸಮಾವೇಶ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿಯವರಿಗೆ ತಮಗೆ ಸಂಕಷ್ಟ ಬಂದಾಗ ಹಾಗೂ ರಾಜೀನಾಮೆ ನೀಡುವ ಸನ್ನಿವೇಶ ಉಂಟಾದಾಗ ವಿನಾಕಾರಣ ಸಾಧನ ಸಮಾವೇಶ ಮಾಡುತ್ತಾರೆ ಎಂದು ಅವರು ಹೇಳಿದ್ದಾರೆ. ಈಗಾಗಲೇ ರಸ್ತೆ ಬದಿಯ ವ್ಯಾಪಾರಿಗಳಿಗೂ ಜಿಎಸ್‌ಟಿ ತೆರಿಗೆ ಹಾಕಿ ಹೆಚ್ಚಿನ ವಸೂಲಾತಿ ಮಾಡುವ ಕಾರ್ಯ ಮಾಡಲಾಗುತ್ತಿದೆ. ಬೇಕರಿ ಹಾಗೂ ರಸ್ತೆ ಬದಿಯ ವ್ಯಾಪಾರಿಗಳಿಗೆ ವಿನಾಕಾರಣ ತೊಂದರೆಯಾಗುತ್ತಿದೆ ಎಂದು ಆರೋಪಿಸಿದ್ದಾರೆ.

<><><>

ರಾಜ್ಯ ಸರ್ಕಾರ ಮಾರ್ಚ್ ತಿಂಗಳಿನಿಂದ "ಬಿ" ಖಾತಾ ಆಂದೋಲನಕ್ಕೆ ಚಾಲನೆ ನೀಡಿದ್ದು, ಜಿಲ್ಲೆಯ ನಗರಸಭೆ, ಪುರಸಭೆ ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳಿಗೆ ಸಾರ್ವಜನಿಕರು ಸಲ್ಲಿಸುವ ಎ ಮತ್ತು ಬಿ ಖಾತೆ ಅರ್ಜಿಗಳನ್ನು ಭೌತಿಕವಾಗಿ ಸ್ವೀಕರಿಸದೆ ಸಕಾಲ ಯೋಜನೆಯಡಿಯಲ್ಲೇ ಕಡ್ಡಾಯವಾಗಿ ಸ್ವೀಕರಿಸಿ ಆನ್‌ಲೈನ್‌ನಲ್ಲಿ ದಾಖಲಿಸಲು ಸೂಚಿಸಲಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ನಗರಸಭೆಗೆ ಭೇಟಿ ನೀಡಿ ಮಾತನಾಡಿದ ಅವರು, ಖಾತೆ ವರ್ಗಾವಣೆ, ಇ ಖಾತಾಗಳ ಬಗ್ಗೆ ಚಿಕ್ಕಬಳ್ಳಾಪುರ ನಗರಸಭೆಯ ವಿರುದ್ಧ ಸಾರ್ವಜನಿಕರಿಂದ ವ್ಯಾಪಕ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಭೇಟಿ ನೀಡಿ ಪೌರಾಯುಕ್ತರು ಮತ್ತು ಸಿಬ್ಬಂದಿಗೆ ಹಲವು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಹೇಳಿದ್ದಾರೆ.

**ಧ್ವನಿ : ಪಿ.ಎನ್. ರವೀಂದ್ರ**

<><><>

ಬೆಂಗಳೂರಿನ ೪೦ ಶಾಲೆಗಳಿಗೆ ಬಾಂಬ್ ಬೆದರಿಕೆ ಇಮೇಲ್ ಬಂದಿದ್ದು, ತನಿಖೆ ಆರಂಭವಾಗಿದೆ. ಬೆಂಗಳೂರಿನ ೪೦ ಖಾಸಗಿ ಶಾಲೆಗಳಿಗೆ ಬಾಂಬ್ ಬೆದರಿಕೆ ಇಮೇಲ್ ಕಳುಹಿಸಲಾಗಿದೆ. ಯಾವುದೇ ಅವಕಾಶ ತೆಗೆದುಕೊಳ್ಳದೆ, ಪೊಲೀಸರು ಮತ್ತು ಇತರ ಸಂಬಂಧಿತ ಇಲಾಖೆಗಳ ಸಿಬ್ಬಂದಿ ಶಾಲೆಗಳಿಗೆ ಧಾವಿಸಿ ವಿದ್ಯಾರ್ಥಿಗಳನ್ನು ಸ್ಥಳಾಂತರಿಸಿದ ನಂತರ ಕೂಂಬಿಂಗ್ ಕಾರ್ಯಾಚರಣೆ ಪ್ರಾರಂಭಿಸಿದರು.

<><><><>

ಉತ್ತರಕನ್ನಡ ಜಿಲ್ಲೆಯ ಕರಾವಳಿಯ ಕೆಲ ತಾಲೂಕುಗಳಲ್ಲಿ ಇಂದು ಸಹ ಮಳೆ ಮುಂದುವರಿದೆ. ನಿರಂತರ ಮಳೆಗೆ ಜಿಲ್ಲೆಯಲ್ಲಿ ಮೂರು ಮನೆಗಳಿಗೆ ಸಂಪೂರ್ಣ ಹಾನಿ ಸಂಭವಿಸಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯ ಪರಿಣಾಮ ಅಲ್ಲಲ್ಲಿ ಅನಾಹುತಗಳೂ ಸಂಭವಿಸುತ್ತಿವೆ. ನಿನ್ನೆಯಿಂದ ಇದುವರೆಗೆ ಜಿಲ್ಲೆಯಲ್ಲಿ ೩೦ಕ್ಕೂ ಅಧಿಕ ಮನೆಗಳಿಗೆ ಭಾಗಶಃ ಹಾನಿಯಾಗಿದ್ದು, ೧೦೦ಕ್ಕೂ ಅಧಿಕ ವಿದ್ಯುತ್ ಕಂಬಗಳು ಮುರಿದು ಬಿದ್ದಿದೆ. ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬಳಿಯ ಅದ್ಯಪಾಡಿ ರಸ್ತೆಯುದ್ದಕ್ಕೂ ಅಲ್ಲಲ್ಲಿ ಗುಡ್ಡ ಕುಸಿತವಾಗಿದೆ. ಜಿಲ್ಲೆಯಲ್ಲಿ ಎಪ್ರಿಲ್ ೧ ರಿಂದ ಇಂದಿನವರೆಗೆ ಒಂದು ಸಾವಿರದ ೧೯೫ ಮನೆಗಳಿಗೆ ಹಾನಿ ಉಂಟಾಗಿದೆ. ಸತತ ಮಳೆಯ ಪರಿಣಾಮ ೭.೪೩ ಹೆಕ್ಟೇರ್ ಪ್ರದೇಶದಲ್ಲಿನ ಕೃಷಿ ಮತ್ತು ೮.೯೦೩ ಹೆಕ್ಟೇರ್ ಪ್ರದೇಶದಲ್ಲಿನ ತೋಟಗಾರಿಕಾ ಬೆಳೆಗಳು ನಾಶವಾಗಿವೆ. ೨೬೧.೬೦ ಕಿಲೋಮೀಟರ್ ಉದ್ದದ ರಸ್ತೆಗಳು ಹದಗೆಟ್ಟಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ.

<><><><>

ಕೊಡಗು ಜಿಲ್ಲೆಗೆ ೨೦೨೫ ರ ಜನವರಿಯಿಂದ ಜೂನ್ ಅಂತ್ಯದವರೆಗೆ ೧೦ ಲಕ್ಷ ೫೦ ಸಾವಿರ ಪ್ರವಾಸಿಗರು ಭೇಟಿ ನೀಡಿದ್ದಾರೆ ಎಂದು ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕಿ ಅನಿತಾ ಭಾಸ್ಕರ್ ತಿಳಿಸಿದ್ದಾರೆ. ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲ್ಪಟ್ಟ ೬೬೮ ಪ್ರವಾಸಿ ತಾಣಗಳಲ್ಲಿ ಕೊಡಗು ಜಿಲ್ಲೆಯ ೨೩ ಪ್ರವಾಸಿ ತಾಣ ಗುರುತಿಸಲಾಗಿದೆ. ತಲಕಾವೇರಿ-ಭಾಗಮಂಡಲ ದೇವಾಲಯಗಳನ್ನು ಪ್ರವಾಸಿ ತಾಣಗಳ ಪಟ್ಟಿಯಿಂದ ಕೈಬಿಟ್ಟು ಧಾರ್ಮಿಕ ಕ್ಷೇತ್ರಗಳ ಪಟ್ಟಿಗೆ ಸೇರಿಸುವಂತೆ ಪ್ರವಾಸೋದ್ಯಮ ಇಲಾಖೆಯ ಆಯುಕ್ತರಲ್ಲಿ ಕೋರಲಾಗಿದೆ ಎಂದು ಅವರು ತಿಳಿಸಿದರು. ಕೊಡಗು ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳಿಗೆ ೨ ಲಕ್ಷದ ೮೧ ಸಾವಿರ ರೂಪಾಯಿ ಅನುದಾನದಲ್ಲಿ ಒಟ್ಟು ೧೪ ವಿವಿಧ ಕಾಮಗಾರಿ ಹಾಗೂ ಮೂಲಭೂತ ಸೌಕರ್ಯವನ್ನು ನಿರ್ಮಿಸಲಾಗಿದೆ ಎಂದು ಅವರು ಹೇಳಿದರು. 'ಒಂದು ಜಿಲ್ಲೆ ಒಂದು ತಾಣ' ಅಡಿ ಕೊಡಗು ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲು ಜಿಲ್ಲೆಯ ಮಾಂದಲ್‌ಪಟ್ಟಿ ಪ್ರವಾಸಿ ತಾಣವನ್ನು ಸರ್ಕಾರದಿಂದ ಆಯ್ಕೆ ಮಾಡಲಾಗಿದೆ. ಅದರಂತೆ ೫೦ ಲಕ್ಷ ವೆಚ್ಚದಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದೂ ಅವರು ಮಾಹಿತಿ ನೀಡಿದರು.

<><><><>

ಮಂಡ್ಯ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತವಾಗಿಸಲು ನಾಳೆ ಜಾಗೃತಿ ಜಾಥಾ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಆನಂದ್ ತಿಳಿಸಿದ್ದಾರೆ.

ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹವನ್ನು ತಡೆಗಟ್ಟಲು ನಿರಂತರವಾಗಿ ಜಾಗೃತಿ ಮೂಡಿಸುವುದರ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಬೇಕಿದೆ ಎಂದರು. ಬಾಲ್ಯ ವಿವಾಹ ಮುಕ್ತ ಜಾಗೃತಿ ಜಾಥಾ ಆಂದೋಲನದಲ್ಲಿ ೨ ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದು ಸಂಚಾರ ವ್ಯವಸ್ಥೆಗೆ ಯಾವುದೇ ತೊಡಕುಂಟಾಗದಂತೆ ಜಾಥವನ್ನು ನಡೆಸಿ. ಜಾಥದಲ್ಲಿ ಭಾಗವಹಿಸುವುದರ ಜೊತೆ ಗೆ ಶಿಸ್ತನ್ನು ಕಾಪಾಡಬೇಕೆಂದು ಸೂಚನೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>